## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 791 |
| 2 | ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 23-07-2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆಗೆ ಕಳೆದ 15 ತಿಂಗಳಿನಿಂದ ಅನುದಾನ ಬಿಡುಗಡೆ ಮಾಡದಿರಲು ಕಾರಣಗಳೇನು; | ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆಗಾಗಿ ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಮಾಡುವ ಕ್ರಮ ಇರುವುದಿಲ್ಲ. ಬದಲಿಗೆ ನಗರೋತ್ಥಾನ, ಅಮೃತ ನಗರೋತ್ಥಾನ, ವಿಶೇಷ ಮೂಲಭೂತ ಸೌಕರ್ಯ, ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆಗಳನ್ನೆಲ್ಲ ಸೇರಿಸಿ ವಿಶೇಷ ಮೂಲಭೂತ ಸೌಕರ್ಯ ಯೋಜನೆಯ ಲೆಕ್ಕ ಶೀರ್ಷಿಕೆಯಡಿ ಅನುದಾನ ಬಿಡುಗಡೆ ಮಾಡಲಾಗುತ್ತದೆ. |
| ಆ) | ಹಿಂದಿನ ಸರ್ಕಾರದ ಅವಧಿಯಲ್ಲಿ ಅಮೃತ ನಗರೋತ್ಥಾನ ಯೋಜನೆಯಡಿ ಒದಗಿಸಿದ್ದ 8149 ಕೋಟಿ ರೂ. ಪೈಕಿ 485 ವೆಚ್ಚದ ಕಾಮಗಾರಿಗಳನ್ನು ಪ್ರಸ್ತುತ ಸರ್ಕಾರವು ಕೈಬಿಡಲು ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ನಅಇ 299 ಎಂಎನ್‌ವೈ 2022 (ಇ), ದಿನಾಂಕ: 07-10-2023ರಲ್ಲಿ ಸಾರ್ವಜನಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ಪ್ರಾರಂಭವಾಗದೇ ಇರುವ ಕಾಮಗಾರಿಗಳನ್ನು ಕೈಬಿಟ್ಟು ಆದೇಶಿಸಲಾಗಿರುತ್ತದೆ.<br><br>ಮುಂದುವರೆದು, ಕಾಮಗಾರಿಗಳನ್ನು ಕೈಬಿಟ್ಟಿರುವುದರಿಂದ ಉಳಿತಾಯವಾಗುವ ರೂ.485.06 ಕೋಟಿಗಳ ಅನುದಾನದಲ್ಲಿ ಸಾರ್ವಜನಿಕ ಪ್ರಾಮುಖ್ಯತೆಯುಳ್ಳ ಹಾಗೂ ತುರ್ತು ಅಗತ್ಯವಿರುವ ಕೆಲವು ಬದಲಿ ಕಾಮಗಾರಿಗಳನ್ನು ರೂ.485.00 ಕೋಟಿಗಳ ವೆಚ್ಚದಲ್ಲಿ ಸಾರ್ವಜನಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಕೈಗೆತ್ತಿಕೊಳ್ಳಲು ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. |
| ಇ) | ಇದರ ಪರಿಣಾಮ ಅನೇಕ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ಕಾರ ತೆಗೆದುಕೊಂಡ ಕ್ರಮಗಳೇನು? | |

**ನಅಇ 357 ಎಂಎನ್‌ವೈ 2024**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ